ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿರುವ ಕುಸುಗಲ್ ಗ್ರಾಮದಲ್ಲಿ ಕುಡಿಯವ ನೀರಿನ ಸಮಸ್ಯೆ.

1563 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿ ಬರತಕ್ಕ ಕುಸುಗಲ್ ಗ್ರಾಮದಲ್ಲಿ ಕುಡಿಯುವ ನೀರಿನ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ಸಮಸ್ಯೆ ನಿವಾರಣೆಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಬಂದಿದೆ.

ಆ) ಗ್ರಾಮದಿಂದ 7 ಕಿ.ಮೀ. ದೂರದಲ್ಲಿ ಒಂದು ಹೊಸ ಕೊಳವೆ ಬಾವಿಯನ್ನು ಸ್ಥಾಪಿಸಲಾಗಿದೆ. ಈ ಕೊಳವೆ ಬಾವಿಯು ಹೆಚ್ಚು ಇಳುವರಿಯಿಂದ ಕೂಡಿದ್ದು, ಇದರಿಂದ ಗ್ರಾಮಕ್ಕೆ ನೀರು ಪೂರೈಕೆ ಮಾಡಲು ಉದ್ದೇಶಿಸಿದೆ. ತುರ್ತು ಕ್ರಮವಾಗಿ ಗ್ರಾಮಕ್ಕೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಹುಬ್ಬಳ್ಳಿ – ಧಾರವಾಡ ನಗರದಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಕಟ್ಟಡಗಳ ದುರಸ್ಥಿ.

1564 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ -ಧಾರವಾಡ ನಗರದಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲಾ ಕಟ್ಟಡಗಳಿಗೆ ಹೊಸ ಕಟ್ಟಡಗಳಿಗಾಗಿ ಹಾಗೂ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಮಂಜೂರಾದ ಹಣವೆಷ್ಟು?*

ಆ) *ಯಾವ ಯಾವ ಯೋಜನೆಗಳಲ್ಲಿ ಈ ಹಣವನ್ನು ಮಂಜೂರು ಮಾಡಲಾಗಿದೆ, ದುರಸ್ಥಿಗಾಗಿ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ?*

ಇ) *ಹಣ ಮಂಜೂರಾಗದಿದ್ದಲ್ಲಿ ಅದಕ್ಕೆ ಕಾರಣವೇನು?*

ಈ) *ಈ ಕಟ್ಟಡ ಕೆಲಸ ಯಾವ ಹಂತದಲ್ಲಿದೆ?*